<u>**ಕರ್ನಾಟಕ ವಿಧಾನ ಪರಿಷತ್ತು**</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 709
ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು
ಉತ್ತರಿಸಬೇಕಾದ ದಿನಾಂಕ : 13.12.2024
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕರ್ನಾಟಕದಲ್ಲಿನ ನವೋದಯ/ಮೊರಾರ್ಜಿ ದೇಸಾಯಿ/ರಾಣಿ ಚನ್ನಮ್ಮ ಇತರೆ ವಸತಿ ಶಾಲೆಗಳಲ್ಲಿ ಹೊರ ನಾಡಿನ ಕನ್ನಡಿಗರ ಮಕ್ಕಳಿಗೆ ಪ್ರವೇಶಾತಿ ನೀಡಲಾಗುತ್ತಿದೆಯೇ, ಇಲ್ಲದಿದ್ದಲ್ಲಿ. ಇದಕ್ಕೆ ಕಾರಣಗಳೇನು;</td><td rowspan="3">ಸರ್ಕಾರದ ಆದೇಶ ಸಂಖ್ಯೆ: ಸಕಇ 94 ಮೊದೇಶಾ 2020, ದಿನಾಂಕ:19/06/2021 ರ ಆದೇಶದಂತೆ ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿದ್ದು, ಕರ್ನಾಟಕ ರಾಜ್ಯದ ಸರ್ಕಾರಿ, ಅನುದಾನಿತ, ಅನುದಾನ ರಹಿತ ಮಾನ್ಯತೆ ಪಡೆದ ಶಾಲೆಯಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಮಾತ್ರ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯ ವಸತಿ ಶಾಲೆಗಳಿಗೆ 6 ನೇ ತರಗತಿಗೆ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಹೊರ ರಾಜ್ಯದ ಕನ್ನಡ ಮಾಧ್ಯಮ ಗಡಿನಾಡ ಮಕ್ಕಳಿಗೆ ಮತ್ತು ಹೊರನಾಡಿನಲ್ಲಿ ನೆಲೆಸಿರುವ ಕನ್ನಡಿಗರ ಮಕ್ಕಳಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳಲ್ಲಿ ಪ್ರವೇಶಾತಿ ನೀಡಲು ಮೀಸಲಾತಿ ನೀಡಲಾಗಿರುವುದಿಲ್ಲ.</td></tr>
<tr><td>ಆ)</td><td>ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹೊರ ರಾಜ್ಯದ ಕನ್ನಡ ಮಾಧ್ಯಮ ಗಡಿನಾಡ ಮಕ್ಕಳಿಗೆ ಪ್ರವೇಶಾತಿ ನೀಡಲಾಗಿದೆ: (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)</td></tr>
<tr><td>ಇ)</td><td>ಹೊರ ನಾಡಿನಲ್ಲಿ ನೆಲೆಸಿರುವ ಕನ್ನಡಿಗರ ಮಕ್ಕಳಿಗೆ ಸದರಿ ವಸತಿ ಶಾಲೆಗಳಲ್ಲಿ ಪ್ರವೇಶಾತಿ ಪಡೆಯಲು ಮೀಸಲಾತಿ ನೀಡಲಾಗಿದೆಯೇ? (ಮಾಹಿತಿ ನೀಡುವುದು)</td></tr>
</table>

ಸಕಇ 313 ಎಂಡಿಎಸ್ 2024

(ಡಾ|| ಹೆಚ್.ಸಿ. ಮಹದೇವಪ್ಪ )
ಸಮಾಜ ಕಲ್ಯಾಣ ಸಚಿವರು